All India Radio: Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

17.02.2025 6.40 P.M.

***************

ಮುಖ್ಯಾಂಶಗಳು

- ಮಾರ್ಚ್ 3 ರಂದು ವಿಧಾನಮಂಡಲ ಅಧಿವೇಶನ; 7 ರಂದು ಬಜೆಟ್ ಮಂಡನೆಗೆ ಸರ್ಕಾರ ನಿರ್ಧಾರ
- ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ– ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಕೇಂದ್ರದಿಂದ ಅಕ್ಕಿ ಖರೀದಿಸಲು ರಾಜ್ಯ ಸರ್ಕಾರ ನಿರಾಸಕ್ತಿ– ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪ
- ಬೇಸಿಗೆಯಲ್ಲಿ ವಿದ್ಯುತ್ ಪೂರೈಕೆಗೆ ಇಂಧನ ಇಲಾಖೆ ಸನ್ನದ್ಧ; 'ಕುಸುಮ್– ಬಿ' ಯೋಜನೆಗೆ ಸರ್ಕಾರ ಆದ್ಯತೆ
- ಮುಖ್ಯಮಂತ್ರಿ ಸ್ಥಾನದ ಬಗ್ಗೆ ಬಹಿರಂಗ ಹೇಳಿಕೆ ನೀಡದಂತೆ ಹೈಕಮಾಂಡ್ ಸೂಚನೆ– ಸಚಿವ ದಿನೇಶ್ ಗುಂಡೂರಾವ್

***************

ಮಾರ್ಚ್ 7 ರಂದು ರಾಜ್ಯ ಸರ್ಕಾರದ ಬಜೆಟ್ ಮಂಡನೆ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾರ್ಚ್ 3 ರಂದು ವಿಧಾನಮಂಡಲ ಅಧಿವೇಶನ ಆರಂಭವಾಗಲಿದ್ದು, ಅಂದು ರಾಜ್ಯಪಾಲರು ಜಂಟಿ ಅಧಿವೇಶನವನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.

ಮಾರ್ಚ್ 4 ರಿಂದ ಮೂರು ದಿನ ರಾಜ್ಯಪಾಲರ ಭಾಷಣದ ಮೇಲೆ ಚರ್ಚೆ ನಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಎಷ್ಟು ದಿನ ಅಧಿವೇಶನ ನಡೆಸಬೇಕು ಎನ್ನುವುದನ್ನು ಕಲಾಪ ಸಲಹಾ ಸಮಿತಿ ನಿರ್ಧಾರ ಮಾಡಲಿದೆ ಎಂದು ಹೇಳಿದ್ದಾರೆ.

***************

ಇದಕ್ಕೂ ಮೊದಲು 2025–26ನೇ ಸಾಲಿನ ರಾಜ್ಯ ಮುಂಗಡ ಪತ್ರ ಹಿನ್ನೆಲೆಯಲ್ಲಿ ರೈತ ಸಂಘಗಳ ಪ್ರತಿನಿಧಿಗಳು ಹಾಗೂ ಮುಖಂಡರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಸಭೆ ನಡೆಸಿದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯ ಮುಂಗಡ ಪತ್ರ ಮಂಡನೆ ಹಿನ್ನೆಲೆಯಲ್ಲಿ ರೈತ ನಾಯಕರೊಂದಿಗೆ ಸಭೆ ನಡೆಸಿ, ಅವರ ಅಭಿಪ್ರಾಯ ಪಡೆಯಲಾಗಿದೆ. ಬಜೆಟ್‌ನಲ್ಲಿ ಸರ್ಕಾರದ ಇತಿಮಿತಿಯಲ್ಲಿ ಏನು ಸೇರಿಸಬೇಕು ಎಂಬ ಬಗ್ಗೆ ಚರ್ಚೆಯಾಗಿದೆ. ರೈತರ ಹಿತ ಕಾಪಾಡುವಲ್ಲಿ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಗೃಹಲಕ್ಷ್ಮಿ ಫಲಾನುಭವಿಗಳಿಗೆ ಪಡಿತರ ಸಹಾಯಧನದ ಬಾಕಿಯನ್ನು ಶೀಘ್ರ ಬಿಡುಗಡೆ ಮಾಡಲಾಗುವುದು ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಯನ್ನು ನಡೆಸಲು ರಾಜ್ಯ ಸರ್ಕಾರ ಸಿದ್ಧವಿದೆ. ಈ ಸಂಬಂಧ ಹೈಕೋರ್ಟ್ ನೀಡುವ ಆದೇಶವನ್ನು ಪಾಲಿಸಲಾಗುವುದು ಎಂದು ಪುನರುಚ್ಚರಿಸಿದ್ದಾರೆ.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಪಕ್ಷದ ವರಿಷ್ಠರಿಗೆ ಬಿಟ್ಟ ವಿಚಾರ ಎಂದು ಅವರು ಹೇಳಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

***************

ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಪ್ರತಿ ಕಿಲೋ ಅಕ್ಕಿಯನ್ನು 22 ರೂಪಾಯಿ 50 ಪೈಸೆಯಂತೆ ನೀಡುತ್ತಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಇದರಿಂದ ರಾಜ್ಯಕ್ಕೆ ವಾರ್ಷಿಕ 2 ಸಾವಿರದ 280 ಕೋಟಿ ರೂಪಾಯಿ ಉಳಿತಾಯವಾಗಲಿದೆ. ಆದರೆ, ರಾಜ್ಯ ಸರ್ಕಾರ ಅದನ್ನು ಸ್ವೀಕರಿಸಲು ಸಿದ್ಧವಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯಕ್ಕೆ ಅಗತ್ಯವಿರುವಷ್ಟು ಅಕ್ಕಿಯನ್ನು ಒದಗಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಅವರು ಪುನರುಚ್ಚರಿಸಿದ್ದಾರೆ.

ರಾಜ್ಯ ಸರ್ಕಾರ, ಗೃಹಲಕ್ಷ್ಮೀಯಂತಹ ಯೋಜನೆಯ ಭರವಸೆ ನೀಡಿದ ಆರ್ಥಿಕ ಸಹಾಯವನ್ನು ವಿತರಿಸಲು ವಿಫಲವಾಗಿದೆ ಎಂದು ಅವರು ದೂರಿದ್ದಾರೆ.

****************

ರಾಜ್ಯದಲ್ಲಿ ಖಾಲಿ ಇರುವ ಮೂರು ಸಾವಿರ ಲೈನ್‌ಮನ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಏಪ್ರಿಲ್ ತಿಂಗಳೊಳಗಾಗಿ ಪೂರ್ಣಗೊಳ್ಳಲಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ತಿಳಿಸಿದ್ದಾರೆ.

ಹಾವೇರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಜನ ಪ್ರತಿನಿಧಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತಕ ವರ್ಷ 19 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಬೇಡಿಕೆ ಇದ್ದು, ಬೇರೆ ಬೇರೆ ರಾಜ್ಯ ಹಾಗೂ ಕೇಂದ್ರದಿಂದ ವಿದ್ಯುತ್ ಖರೀದಿಸಲಾಗಿದೆ. ಗ್ರಾಹಕರಿಗೆ ಸಮರ್ಪಕ ವಿದ್ಯುತ್ ಪೂರೈಕೆಗೆ ಇಂಧನ ಇಲಾಖೆ ಸನ್ನದ್ಧವಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಯಾವುದೇ ವಿದ್ಯುತ್ ಕೊರತೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕೃಷಿ ಪಂಪ್‌ಸೆಟ್ ಗಳಿಗೆ ವಿದ್ಯುತ್ ಸಮಸ್ಯೆ ಆಗಬಾರದು ಎಂಬ ಕಾರಣಕ್ಕೆ ಸೋಲಾರ್ ಪಂಪ್ ಸೆಟ್ ಒದಗಿಸುವ ಕುಸುಮ್–ಬಿ ಯೋಜನೆಗೆ ಸರ್ಕಾರ ಆದ್ಯತೆ ನೀಡುತ್ತಿದೆ ಎಂದು ತಿಳಿಸಿದ್ದಾರೆ.

****************

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ಮುಖ್ಯಮಂತ್ರಿ ಸ್ಥಾನದ ಬಗ್ಗೆ ಯಾರೂ ಬಹಿರಂಗ ಹೇಳಿಕೆ ನೀಡದಂತೆ ಕಾಂಗ್ರೆಸ್ ಹೈಕಮಾಂಡ್ ಸೂಚಿಸಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಸೂಚನೆಯನ್ನು ಎಲ್ಲರೂ ಪಾಲಿಸಬೇಕು ಎಂದು ಹೇಳಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಸಚಿವ ರಾಜಣ್ಣ ಆಸೆಪಟ್ಟರೆ ತಪ್ಪಿಲ್ಲ. ಆದರೆ ಪಕ್ಷ ಏನು ತೀರ್ಮಾನ ತೆಗೆದುಕೊಳ್ಳುತ್ತದೋ ಅದುವೇ ಅಂತಿಮ ಎಂದು ಸ್ಪಷ್ಟಪಡಿಸಿದ್ದಾರೆ.

****************

ಮೆಟ್ರೋ ದರ ಏರಿಕೆಯಲ್ಲಿ ರಾಜ್ಯ ಸರ್ಕಾರದ ಪಾತ್ರವಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಟ್ರೋ ದರ ಪರಿಷ್ಕರಣೆಗೆ ಔಪಚಾರಿಕ ಕಾರ್ಯ ವಿಧಾನಗಳ ಅವಶ್ಯಕತೆ ಇದೆ. ಮೆಟ್ರೋ ಸೇವೆಗಳನ್ನು ಹೊಂದಿರುವ ಪ್ರತಿಯೊಂದು ರಾಜ್ಯವು, ದರ ಏರಿಕೆಗಾಗಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸುತ್ತದೆ ಎಂದು ಹೇಳಿದ್ದಾರೆ.

ಶುಲ್ಕ ಪರಿಷ್ಕರಣೆಗಾಗಿ ಕೇಂದ್ರ ಸರ್ಕಾರ ನೇಮಿಸಿದ ಸಮಿತಿಯಲ್ಲಿ ಮದ್ರಾಸ್ ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶರಾದ ಆರ್.ತಾರಿಣಿ ಅಧ್ಯಕ್ಷರಾಗಿದ್ದಾರೆ. ಕೇಂದ್ರ ಸರ್ಕಾರದ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಸತೀಂದರ್ ಪಾಲ್ ಸಿಂಗ್, ನಿವೃತ್ತ ಐಎಎಸ್ ಅಧಿಕಾರಿ ರಮಣ ರೆಡ್ಡಿ ಸದಸ್ಯರಾಗಿದ್ದಾರೆ. ಇದೇ ಸಮಿತಿ ಮೆಟ್ರೊ ದರ ಏರಿಕೆಯ ನಿರ್ಧಾರ ಕೈಗೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.

ಇದೇ ವೇಳೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಮೆಟ್ರೋ ದರ ಏರಿಕೆ ಕುರಿತಂತೆ ನೀಡಿದ ಹೇಳಿಕೆ ವಿರುದ್ಧ ಸಚಿವ ರಾಮಲಿಂಗಾ ರೆಡ್ಡಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

****************

ಪ್ರಸಕ್ತ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗಳು ಸುಮಾರು 5 ಲಕ್ಷ ಟನ್ ವರೆಗೆ ಕಬ್ಬು ನುರಿಸಿವೆ ಎಂದು ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವರ್ಷಕ್ಕೆ ಹೋಲಿಸಿದರೆ ಪ್ರಸಕ್ತ ವರ್ಷ ಕಡಿಮೆ ಪ್ರಮಾಣದ ಕಬ್ಬು ನುರಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ಸಕ್ಕರೆ ಕಾರ್ಖಾನೆಗಳು ಶೇಕಡ 75 ರಿಂದ 80 ರಷ್ಟು ಬಿಲ್ ಪಾವತಿ ಮಾಡಿವೆ. ಕೆಲ ಕಾರ್ಖಾನೆಗಳು ಶೇಕಡ 50ರಿಂದ 60 ರಷ್ಟು ಪಾವತಿ ಮಾಡಿವೆ ಎಂದು ಮಾಹಿತಿ ನೀಡಿದ್ದಾರೆ.

ಕಬ್ಬು ನುರಿಸುವಿಕೆ ಪೂರ್ಣಗೊಳಿಸುವಷ್ಟರಲ್ಲಿ ರೈತರಿಗೆ ಎಲ್ಲ ಹಣ ಪಾವತಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

****************

ದಕ್ಷಿಣ ಕನ್ನಡ ಜಿಲ್ಲಾ ಸಾಹಿತ್ಯ ಪರಿಷತ್ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ವತಿಯಿಂದ ಇದೇ 21 ಮತ್ತು 22ರಂದು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 27ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಂ.ಪಿ.ಶ್ರೀನಾಥ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಹಿತಿ ಡಾ.ಬಿ.ಪ್ರಭಾಕರ ಶಿಶಿಲ ಅವರ ಸರ್ವಾಧ್ಯಕ್ಷತೆಯಲ್ಲಿ ಸಮ್ಮೇಳನ ನಡೆಯಲಿದೆ. ಇದೇ 21 ರಂದು ಅಸೈಗೋಳಿಯ ಕೇಂದ್ರ ಮೈದಾನದಿಂದ ಕನ್ನಡ ಸಾಂಸ್ಕೃತಿಕ ದಿಬ್ಬಣ ಹೊರಡಲಿದ್ದು, ಪದ್ಮಶ್ರೀ ಪುರಸ್ಕೃತ ಹರೇಕಳ ಹಾಜಬ್ಬ ಅವರು ಚಾಲನೆ ನೀಡಲಿದ್ದಾರೆ.

ಬಳಿಕ ನಡೆಯಲಿರುವ ಉದ್ಘಾಟನಾ ಸಮಾರಂಭದಲ್ಲಿ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮತ್ತಿತರರು ಭಾಗವಹಿಸಲಿದ್ದಾರೆ.

****************

ರೇಡಿಯೋ ಕಿಸಾನ್ ದಿವಸದ ನಿಮಿತ್ತ ಹಾಸನ ಆಕಾಶವಾಣಿಯು ಹವಾಮಾನ ಬದಲಾವಣೆ & ಕೃಷಿ ಕುರಿತ ವಿಚಾರ ಸಂಕಿರಣವನ್ನು ಏರ್ಪಡಿಸಿತ್ತು. ಕಾರ್ಯಕ್ರಮವನ್ನು ಹಾಸನದ ಜಿಲ್ಲಾಧಿಕಾರಿ ಸಿ.ಸತ್ಯಭಾಮ ಅವರು ಗಿಡಕ್ಕೆ ನೀರು ಎರೆಯುವ ಮೂಲಕ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ರೇಡಿಯೋ ಇಂದಿಗೂ ಪರಿಣಾಮಕಾರಿ ಮಾಧ್ಯಮವಾಗಿದೆ ಎಂದು ತಿಳಿಸಿದರು.

ಪ್ರತಿಯೊಬ್ಬರೂ ಮಣ್ಣಿನ ಫಲವತ್ತತೆಯನ್ನು ಕಾಪಾಡಲು ಕಾಳಜಿ ವಹಿಸಬೇಕು ಎಂದು ಕರೆ ನೀಡಿದರು.

ಹಾಸನ ಆಕಾಶವಾಣಿಯ ಕಾರ್ಯಕ್ರಮ ಮುಖ್ಯಸ್ಥರಾದ ಬಿ.ವಿ.ಶ್ರೀಧರ್ ಮಾತನಾಡಿ, ಹವಾಮಾನದ ಬದಲಾವಣೆಯು ನಾವೇ ಸೃಷ್ಟಿಸಿರುವ ಸಮಸ್ಯೆಯಾಗಿದೆ ಎಂದು ಅಭಿಪ್ರಾಯಪಟ್ಟರು.

****************

ಸಂಕ್ಷಿಪ್ತ ಸುದ್ದಿಗಳು

- ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಸ್ಥಾಪಿಸಿರುವ ಕಾರ್ಯನಿರತ ಪತ್ರಕರ್ತರ ಕಲ್ಯಾಣನಿಧಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಮಂಜೂರು ಮಾಡಿದ್ದ 25 ಲಕ್ಷ ರೂಪಾಯಿ ಅನುದಾನ ಸಂಘದ ಕಲ್ಯಾಣನಿಧಿ ಖಾತೆಗೆ ಬಿಡುಗಡೆಯಾಗಿದೆ.
- ರಾಜ್ಯದ 9 ವಿಶ್ವವಿದ್ಯಾಲಯಗಳನ್ನು ಮುಚ್ಚಲು ಮುಂದಾಗಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿ, ಹುಬ್ಬಳ್ಳಿಯಲ್ಲಿಂದು ಅಖಿಲ ಭಾರತ್ ವಿದ್ಯಾರ್ಥಿ ಪರಿಷತ್ ನ ಸದಸ್ಯರು ವಿಭಿನ್ನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು.

********ಮುಕ್ತಾಯ*******